ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ)

ಅ) ಈ ಯೋಜನೆಗೆ ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಿಸಲಾಗಿದೆ. ಕಾಮಗಾರಿಯನ್ನು ಸಧ್ಯದಲ್ಲಿ ಪ್ರಾರಂಭಿಸಲಾಗುವುದು.

ಇ) 2002-03ನೇ ಸಾಲಿನ ಆಯವ್ಯಯದಲ್ಲಿ 0.10 ಲಕ್ಷ ರೂ. ಅನುದಾನ ಒದಗಿಸಲಾಗಿದೆ.

ಹುಕ್ಕೇರಿ ತಾಲ್ಲೂಕಿನ ಕಮತನೂರು ಕೆರೆ ನಿರ್ಮಾಣ

737(842) ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ್ (ಸಂಕೇಶ್ವರ್) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನಲ್ಲಿ ಮತನೂರು ಕೆರೆಯು ಒಡೆದು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪುನರ್ ನಿರ್ಮಾಣ ಕಾರ್ಯವನ್ನು ಯಾವಾಗ ಕೈಗೆತ್ತಿಗೊಳ್ಳಲಾಗುವುದು;

ಇ) ಈ ಕಾಮಗಾರಿಗೆ ತಾಂತ್ರಿಕ ಅನುಮೋದನೆ ಪಡೆಯಲಾಗಿದೆಯೇ;

ಈ) ಈ ಪುನರ್ ನಿರ್ಮಾಣ ಕಾರ್ಯಕ್ಕೆ ತಗಲುವ ವೆಚ್ಚವೆಷ್ಟು; ಇದಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು)

ಅ) ಬಂದಿದೆ.

ಆ) ಈ ಕಾಮಗಾರಿಯ ಒಡ್ಡಿನ ಪುನರ್ ನಿರ್ಮಾಣ ಕಾರ್ಯವನ್ನು ಇಂಡಿಯನ್ ಇನ್ಸಿಟ್ಯೂಟ್ ಆಫ್ ಸೈನ್ಸ್ ಪರಿಣಿತ ತಂಡವು ದಿ: 24.11.02ರಂದು ಸಮೀಕ್ಷಿಸಿದೆ. ಮಣ್ಣು ಪರೀಕ್ಷೆಗೆ ತೆಗೆದುಕೊಂಡು ಹೋಗಿದ್ದಾರೆ. ಅವರ ವರದಿಯನ್ನು ಪಡೆದು ಅಂದಾಜನ್ನು ತಯಾರಿಸಿ ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿಯಿಂದ ಅನುಮೋದನೆ ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಇ) ಈ) ಒಡ್ಡಿನ ಪುನರ್ ನಿರ್ಮಾಣದ ಅಂದಾಜನ್ನು ತಯಾರಿಸಿರುವುದಿಲ್ಲ.

ಸಂಕೇಶ್ವರ ಹಾಗೂ ಕಣಗಾಲಾ ಮತ್ತು ದಡ್ಡಿಯಲ್ಲಿ 110 ಹಾಗೂ 33 ಕೆ.ವಿ. ಸ್ಟೇಷನ್ ಸ್ಥಾಪನೆ

738(843) ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ (ಸಂಕೇಶ್ವರ್) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಹುಕ್ಕೇರಿ ತಾಲ್ಲೂಕಿನ ಸಂಕೇಶ್ವರ ಹಾಗೂ ಕಣಗಲಾ ಮತ್ತು ದಡ್ಡಿಯಲ್ಲಿ ಕೆ.ವಿ.ಸ್ಟೇಷನ್‌ಗಳನ್ನು ಯಾವಾಗ ಮಾಡಲಾಗುವುದು?

ಆ) ಸದರಿ ಸ್ಟೇಷನ್‌ಗಳ ಸ್ಥಾಪನೆಯ ಪ್ರಸ್ತಾವನೆ ಸ್ವೀಕೃತವಾಗಿ ಹಲವು ದಿವಸಗಳಾದರೂ ಇಲ್ಲಿಯವರೆಗೆ ಈ ಕಾಮಗಾರಿಗಳನ್ನು ಪ್ರಾರಂಭಿಸದಿರಲು ಕಾರಣಗಳೇನು?

ಶ್ರೀ ಬಸವರಾಜ್‌ಪಾಟೀಲ್ (ಇಂಧನ ರಾಜ್ಯ ಸಚಿವರು)

ಅ) ಹುಕ್ಕೇರಿ ತಾಲ್ಲೂಕಿನ ಸಂಕೇಶ್ವರದಲ್ಲಿ ಹಾಲಿ ಇರುವ 33 ಕೆ.ವಿ. ಸಬ್ ಸ್ಟೇಷನ್ನನ್ನು 110 ಕೆ.ವಿ. ವಿದ್ಯುತ್ ಸಬ್-ಸ್ಟೇಷನನ್ನಾಗಿ ಉನ್ನತೀಕರಣಗೊಳಿಸಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ. ಈ ಕಾಮಗಾರಿಯನ್ನು

ಮುಂಬರುವ ವರ್ಷವಾದ 2003-04ರಲ್ಲಿ ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ. ನಿರ್ಮಾಣ ಕಾರ್ಯಗಳನ್ನು ಪ್ರಾರಂಭಿಸಿದ ನಂತರ ಪೂರ್ಣಗೊಳಿಸಲು 15 ರಿಂದ 18 ತಿಂಗಳುಗಳ ಕಾಲಾವಕಾಶ ಬೇಕಾಗುತ್ತದೆ.

ಹುಕ್ಕೇರಿ ತಾಲ್ಲೂಕಿನ ಕಣಗಲಾ ಗ್ರಾಮದಲ್ಲಿ ಒಂದು 33 ಕೆ.ವಿ. ಸಬ್ ಸ್ಟೇಷನನ್ನು ಸ್ಥಾಪಿಸುವ ಪ್ರಸ್ತಾವನೆಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮಿತಿಯು ಈಗಾಗಲೇ ಅನುಮೋದನೆಯನ್ನು ನೀಡಿರುತ್ತದೆ. ಆದರೆ, ಹುಕ್ಕೇರಿ ತಾಲ್ಲೂಕು ಗ್ರಾಮೀಣ ವಿದ್ಯುತ್ ಸಹಕಾರ ಸಂಘವು ಲೈಸೆನ್ಸಿದಾರರಾಗಿದ್ದು, ಈ ಸಂಘವು ಹುಕ್ಕೇರಿ ತಾಲ್ಲೂಕಿನ ವಿದ್ಯುತ್ ಸರಬರಾಜಿನ ವಿತರಣೆಯ ಕಾರ್ಯವನ್ನು ನಿರ್ವಹಿಸುತ್ತಿದೆ. ಕರ್ನಾಟಕ ವಿದ್ಯುತ್ ಸುಧಾರಣಾ ಕಾಯಿದೆ 1992ರಪ್ರಕಾರ 33 ಕೆ.ವಿ ವಿದ್ಯುತ್ ವರೆಗಿನ ವಿದ್ಯುತ್ ವ್ಯವಸ್ಥೆಯನ್ನು ವಿತರಣಾ ವ್ಯವಸ್ಥೆಯೆಂದು ಪರಿಗಣಿಸಲಾಗಿರುವುದರಿಂದ, ಹುಕ್ಕೇರಿ ತಾಲ್ಲೂಕಿನಲ್ಲಿ 33 ಕೆ.ವಿ. ವಿದ್ಯುತ್ ಸಬ್-ಸ್ಟೇಷನನ್ನುಗಳ ನಿರ್ಮಾಣವನ್ನು ಹುಕ್ಕೇರಿ ತಾಲ್ಲೂಕು ವಿದ್ಯುತ್ ಸಹಕಾರ ಸಂಘವೇ ಈಗ ಕೈಗೊಳ್ಳಬೇಕಾಗಿರುತ್ತದೆ.

ಹುಕ್ಕೇರಿ ತಾಲ್ಲೂಕಿನ ದಡ್ಡಿಯಲ್ಲಿ ಒಂದು 110 ಕೆ.ವಿ. ವಿದ್ಯುತ್ ಸಬ್‌ಸ್ಟೇಷನನ್ನು ಸ್ಥಾಪಿಸುವ ಪ್ರಸ್ತಾವನೆಯು ಸದ್ಯಕ್ಕೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಮುಂದೆ ಇರುವುದಿಲ್ಲ.

ಆ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಹೊಸ ವಿದ್ಯುತ್ ಸಬ್-ಸ್ಟೇಷನ್ನುಗಳ ನಿರ್ಮಾಣ ಕಾರ್ಯಗಳನ್ನು ಹಣಕಾಸು ಸಂಸ್ಥೆಗಳಾದ ಗ್ರಾಮೀಣ ವಿದ್ಯುದೀಕರಣ ನಿಗಮ/ಪವರ್ ಫೈನಾನ್ಸ್ ಕಾರ್ಪೊರೇಷನ್ ಇತ್ಯಾದಿಗಳಿಂದ ಸಾಲ ಸೌಲಭ್ಯವನ್ನು ಪಡೆದು ನಿರ್ವಹಿಸಬೇಕಾಗಿರುತ್ತದೆ. ಈ ರೀತಿ ಪಡೆಯಲಾಗುವ ಸಾಲದ ಅಸಲು ಮತ್ತು ಬಡ್ಡಿಗಳ ಪಾವತಿಗಳನ್ನು ಗಣನೆಗೆ ತೆಗೆದುಕೊಂಡು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಸಾಲ ಸೌಲಭ್ಯವನ್ನು ಪಡೆಯಬೇಕಾಗಿರುತ್ತದೆ. ಅಸಲು ಮರುಪಾವತಿ ಮತ್ತು ಬಡ್ಡಿಗಳ ಪಾವತಿಗಳ ಹೊರ ಹೆಚ್ಚಾಗದಂತೆ ಜಾಗರೂಕತೆ ವಹಿಸಬೇಕಾಗಿರುವುದರಿಂದ, ಪಡೆಯಬೇಕಾಗಿರುವ ಸಾಲದ ಮೊತ್ತದ ಮೇಲೆ ಅಂಕುಶವನ್ನು ಹೊಂದಬೇಕಾಗಿರುತ್ತದೆ. ಈ ಮುಖ್ಯ ಕಾರಣದಿಂದಾಗಿ, ಎಲ್ಲಾ ವಿದ್ಯುತ್ ಸಬ್ ಸ್ಟೇಷನ್ನುಗಳ ನಿರ್ಮಾಣ ಕಾರ್ಯಗಳನ್ನು ಒಂದೇ ಬಾರಿಗೆ ಕೈಗೊಳ್ಳುವುದು ಬಹಳ ಕಷ್ಟಕರವಾಗಿರುತ್ತದೆ. ಬೆಳಗಾವಿ ಜಿಲ್ಲೆಯಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಈಗಾಗಲೇ ಗೋಕಾಕ್, ಐನಾಪುರ, ಯರಗಟ್ಟಿ ಮತ್ತು ಬೈಲಹೊಂಗಲ್‌ಗಳಲ್ಲಿ 110 ಕೆ.ವಿ. ವಿದ್ಯುತ್ ಸಬ್-ಸ್ಟೇಷನ್ನುಗಳ ನಿರ್ಮಾಣ ಕಾರ್ಯಗಳನ್ನು ಕೈಗೊಂಡಿದ್ದು, ಇವುಗಳ ಪೈಕಿ ಗೋಕಾಕ್ ಮತ್ತು ಐನಾಪುರಗಳಲ್ಲಿ ವಿದ್ಯುತ್ ಸಬ್-ಸ್ಟೇಷನ್ನುಗಳ ನಿರ್ಮಾಣ ಕಾರ್ಯಗಳನ್ನು ಪೂರ್ಣಗೊಳಿಸಿದ್ದು, ಈ ಸಬ್-ಸ್ಟೇಷನ್ನುಗಳನ್ನು ಇತ್ತೀಚೆಗೆ ಚಾಲನೆಗೊಳಿಸಲಾಗಿರುತ್ತದೆ. ಯರಗಟ್ಟಿಯಲ್ಲಿ ಸಬ್-ಸ್ಟೇಷನ್ನಿನ ನಿರ್ಮಾಣ ಕಾರ್ಯವು ಮುಕ್ತಾಯದ ಹಂತವನ್ನು ತಲುಪಿರುತ್ತದೆ. ಶೀಘ್ರದಲ್ಲಿಯೇ ಚಾಲನೆಗೊಳ್ಳುವ ನಿರೀಕ್ಷೆಯಲ್ಲಿದೆ. ಬೈಲಹೊಂಗಲದಲ್ಲಿ ಸಬ್-ಸ್ಟೇಷನ್ನಿನ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿದೆ. ಬೆಳಗಾವಿ ಜಿಲ್ಲೆಯಲ್ಲಿ ನಿರ್ಮಾಣದ ಹಂತದಲ್ಲಿದ್ದ 110 ಕೆ.ವಿ. ವಿದ್ಯುತ್ ಸಬ್-ಸ್ಟೇಷನ್ನುಗಳ ನಿರ್ಮಾಣ ಕಾರ್ಯಗಳು ಮುಕ್ತಾಯ ಘಟ್ಟವನ್ನು ತಲುಪಿರುವುದರಿಂದ, ಸಂಕೇಶ್ವರದಲ್ಲಿ ಈಗ 110 ಕೆ.ವಿ. ವಿದ್ಯುತ್ ಸಬ್ ಸ್ಟೇಷನ್ನಿನ ನಿರ್ಮಾಣದ ಬಗ್ಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಗಮನಹರಿಸುತ್ತಿದೆ.

ಇದೇ ತಾಲ್ಲೂಕಿನ ದಡ್ಡಿಯಲ್ಲಿ 110 ಕೆ.ವಿ. ಸಬ್ ಸ್ಟೇಷನ್ನಿನ ಸ್ಥಾಪನೆ ಬಗ್ಗೆ ಪ್ರಸ್ತಾವನೆಯು ಸದ್ಯಕ್ಕೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಮುಂದೆ ಇಲ್ಲದಿರುವುದರಿಂದ, ಈ ವಿದ್ಯುತ್ ಸಬ್ ಸ್ಟೇಷನ್ ಸ್ಥಾಪನೆಯ ಪ್ರಶ್ನೆಯು ಸದ್ಯಕ್ಕೆ ಉದ್ಭವಿಸುವುದಿಲ್ಲ.

ಕರ್ನಾಟಕ ವಿದ್ಯುತ್ ಸುಧಾರಣಾ ಕಾಯಿದೆ 1999ರ ಪ್ರಕಾರ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಈಗ ವಿದ್ಯುತ್ ಪ್ರಸರಣ ಕಂಪೆನಿಯಾಗಿದ್ದು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು ನೀಡಿರುವ ಲೈಸೆನ್ಸ್ ಪ್ರಕಾರ 66 ಕೆ.ವಿ. ಮತ್ತು ಅದಕ್ಕೂ ಮೇಲ್ಪಟ್ಟ ವಿದ್ಯುತ್ ವ್ಯವಸ್ಥೆಯ ನಿರ್ಮಾಣ ಮತ್ತು ನಿರ್ವಹಣೆಯ ಜವಾಬ್ದಾರಿಯನ್ನು ಹೊಂದಿರುತ್ತದೆ. ಆದುದರಿಂದ, 33 ಕೆ.ವಿ. ವಿದ್ಯುತ್ ಸಬ್ ಸ್ಟೇಷನ್ನುಗಳನ್ನು ಸಂಬಂಧಿಸಿದ ವಿದ್ಯುತ್ ವಿತರಣಾ ಲೈಸೆನ್ಸ್‌ದಾರರೇ ನಿರ್ವಹಿಸಬೇಕಾಗಿರುತ್ತದೆ. ಹೀಗಾಗಿ, ಹುಕ್ಕೇರಿ ತಾಲ್ಲೂಕಿನ ಕಣಗಲಾ ಗ್ರಾಮದಲ್ಲಿ 33 ಕೆ.ವಿ. ವಿದ್ಯುತ್ ಸಬ್ ಸ್ಟೇಷನ್ನಿನ ನಿರ್ಮಾಣ ಕಾರ್ಯವನ್ನು ವಿದ್ಯುತ್ ವಿತರಣಾ ಲೈಸೆನ್ಸುದಾರರಾದ ಹುಕ್ಕೇರಿ ತಾಲ್ಲೂಕು ಗ್ರಾಮೀಣ ವಿದ್ಯುತ್ ಸಹಕಾರ ಸಂಘವು ಕೈಗೊಳ್ಳಬೇಕಾಗಿರುತ್ತದೆ.

ಪ್ರಾದೇಶಿಕ ಅಸಮತೋಲನಾ ಸಮಿತಿ ವರದಿ

739(844) ಶ್ರೀ ಅಪ್ಪಯ್ಯಗೌಡ ಬಸಗೌಡ ಪಾಟೀಲ (ಸಂಕೇಶ್ವರ್) ಮಾನ್ಯ ಯೋಜನಾ, ಸಾಂ.ಹ. ಮತ್ತು ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪ್ರಾದೇಶಿಕ ಅಸಮತೋಲನಾ ಸಮಿತಿಯು ಸರ್ಕಾರಕ್ಕೆ ವರದಿ ನೀಡಿದೆಯೇ?

ಆ) ನೀಡಿದ್ದಲ್ಲಿ, ವರದಿಯ ಪ್ರಮುಖ ಶಿಫಾರಸ್ಸುಗಳೇನು?

ಇ) ವರದಿಯ ಪ್ರಕಾರ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು?

ಈ) ವರದಿಯ ಆಧಾರದ ಮೇಲೆ ಸರ್ಕಾರವು ಬಿಡುಗಡೆ ಮಾಡಬೇಕಾದ ಮೊತ್ತವೆಷ್ಟು ಹಾಗೂ ಬಿಡುಗಡೆ ಮಾಡಿರುವ ಮೊತ್ತವೆಷ್ಟು?

ಶ್ರೀ ಆರ್.ಬಿ. ತಿಮ್ಮಾಪುರ್ (ಯೋಜನಾ, ಸಾಂ.ಹ. ಮತ್ತು ಸಾಂಖ್ಯಿಕ ಸಚಿವರು)

ಅ) - ಹೌದು -

ಆ) ಲಗತ್ತಿಸಿದೆ.

ಇ) ಪ್ರಾದೇಶಿಕ ಅಸಮತೋಲನಾ ನಿವಾರಣಾ ಉನ್ನತಾಧಿಕಾರ ಸಮಿತಿಯ ಶಿಫಾರಸ್ಸುಗಳನ್ನು ಪರಿಶೀಲಿಸಲು ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ.

ಈ) ವರದಿಯ ಪ್ರಕಾರ ರೂ. 16,000 ಕೋಟಿ ಗಳಷ್ಟನ್ನು ಬಿಡುಗಡೆ ಮಾಡಬೇಕು. ಹಾಗೂ ಪ್ರಶ್ನೆ ಸಂಖ್ಯೆ (ಇ)ಗೆ ನೀಡಿರುವ ಉತ್ತರದ ಪ್ರಕಾರ ಇದುವರೆವಿಗೆ ಹಣವನ್ನು ಬಿಡುಗಡೆ ಮಾಡಿರುವುದಿಲ್ಲ.

ಅನುಬಂಧ

ಪ್ರಮುಖವಾದ ಶಿಫಾರಸ್ಸುಗಳು ಈ ಕೆಳಕಂಡಂತಿವೆ:

1. ಪ್ರದೇಶಾಭಿವೃದ್ಧಿ ಮಂಡಳಿಗಳನ್ನು ರದ್ದುಗೊಳಿಸುವುದು.
2. ಉತ್ತರ ಕರ್ನಾಟಕ ಪ್ರದೇಶದ ಕಾರ್ಯನಿರ್ವಹಣೆಗೆ ಸೀಮಿತವಾಗುವಂತೆ ಕರ್ನಾಟಕ ರಾಜ್ಯ ಹಣಕಾಸು ಕಾರ್ಪೊರೇಶನ್ ಸ್ಥಾಪಿಸುವುದು.